# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆ ಮಾಡಲಾಗುವ ಗ್ರಾಮಗಳ ಜನಸಂಖ್ಯೆಯ ಮಿತಿಯನ್ನು ಸಡಿಲಗೊಳಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:50:ಸುಗ್ರಾಯೋ:2012 ದಿ:20.10.2014
2. ಆರ್ಥಿಕ ಇಲಾಖೆ (ವೆಚ್ಚ-6) ಟಿಪ್ಪಣಿ ಸಂಖ್ಯೆ ಆಇ 232 ವೆಚ್ಚ-6/2015 ದಿನಾಂಕ: 07.05.2015.
3. ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಯೋಇ 45 ಜಿಯೋವಿ 2015 ದಿನಾಂಕ: 03.06.2015.

***

**ಪ್ರಸ್ತಾವನೆ:**

ಗ್ರಾಮ ವಿಕಾಸ ಯೋಜನೆಯನ್ನು ರಾಜ್ಯದ 189 ಗ್ರಾಮೀಣ ವಿಧಾನಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಮೂರು ವರ್ಷದಲ್ಲಿ ಅನುಷ್ಠಾನಗೊಳಿಸಲು ಮೇಲೆ ಓದಲಾದ (1) ರ ಸರ್ಕಾರಿ ಆದೇಶ ಹೊರಡಿಸಿ ಅದರಂತೆ ಮಾರ್ಗಸೂಚಿಯನ್ನು ಹೊರತರಲಾಗಿದೆ. ಅದರಂತೆ ಗ್ರಾಮ ವಿಕಾಸ ಯೋಜನೆಯನ್ನು ಒಟ್ಟಾರೆ ರೂ.750.00 ಕೋಟಿಗಳ ವೆಚ್ಚದಲ್ಲಿ ಪ್ರತಿ ಗ್ರಾಮೀಣ ವಿಧಾನಸಭಾ ಮತಕ್ಷೇತ್ರಗಳ ವ್ಯಾಪ್ತಿಯಲ್ಲಿ ಎಸ್‌ಸಿ, ಎಸ್‌ಟಿ ಜನಸಂಖ್ಯೆಯನ್ನೊಳಗೊಂಡ 2 ಗ್ರಾಮಗಳೂ ಸೇರಿದಂತೆ ಒಟ್ಟು 5 ಗ್ರಾಮಗಳಿಗೆ ರೂ.3.75 ಕೋಟಿಗಳನ್ನು ನಿಗಧಿಪಡಿಸಿ ಗರಿಷ್ಠ 5000 ಜನಸಂಖ್ಯೆಯನ್ನು ಮಿತಿಗೊಳಿಸಲಾಗಿತ್ತು. ಹಾಗೆಯೇ 2 ಪೂರ್ಣ ತಾಲ್ಲೂಕುಗಳನ್ನು ಹೊಂದಿರುವ 6 ಗ್ರಾಮೀಣ ವಿಧಾನಸಭಾ ಕ್ಷೇತ್ರಗಳಲ್ಲಿ ಎಸ್‌ಸಿ, ಎಸ್‌ಟಿ ಜನಸಂಖ್ಯೆಯನ್ನೊಳಗೊಂಡ 3 ಗ್ರಾಮಗಳೂ ಸೇರಿದಂತೆ 8 ಗ್ರಾಮಗಳಿಗೆ ರೂ.6.00 ಕೋಟಿಗಳ ಅನುದಾನವನ್ನು ನಿಗಧಿಪಡಿಸಿ ಗರಿಷ್ಠ 8000 ಜನಸಂಖ್ಯೆಯನ್ನು ಮಿತಿಗೊಳಿಸಲಾಗಿತ್ತು.

ಆದರೆ ರಾಜ್ಯದ ಕೆಲವೊಂದು ಭಾಗಗಳಲ್ಲಿ ಹೆಚ್ಚಿನ ಜನಸಂಖ್ಯೆಯುಳ್ಳ ಗ್ರಾಮಗಳು ಹೆಚ್ಚು ಸಂಖ್ಯೆಯಲ್ಲಿರುವ ಕಾರಣ ಗ್ರಾಮ ವಿಕಾಸ ಯೋಜನೆಯಡಿ 5 ಗ್ರಾಮಗಳಿಗೆ ಗರಿಷ್ಠ 5000 ಅಥವಾ 8 ಗ್ರಾಮಗಳಿಗೆ ಗರಿಷ್ಠ 8000 ಜನಸಂಖ್ಯೆಯ ಮಿತಿಯನ್ನು ಸಡಿಲಗೊಳಿಸುವ ಬಗ್ಗೆ ವಿಧಾನ ಸಭಾ ಸದಸ್ಯರುಗಳು ಸರ್ಕಾರದ ಗಮನಕ್ಕೆ ತಂದಿರುತ್ತಾರೆ. ಸದರಿ ವಿಷಯವನ್ನು ಪರಿಗಣಿಸಿ ಅದರಂತೆ ಗ್ರಾಮ ವಿಕಾಸ ಯೋಜನೆಯಡಿ 5 ಗ್ರಾಮಗಳಿಗೆ ಗರಿಷ್ಠ 5000 ಜನಸಂಖ್ಯೆಯ ಮಿತಿಯನ್ನು ಮತ್ತು 8 ಗ್ರಾಮಗಳಿಗೆ ಗರಿಷ್ಠ 8000 ಜನಸಂಖ್ಯೆಯ ಮಿತಿಯನ್ನು ಸಡಿಲಗೊಳಿಸಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ : 17 : ಗ್ರಾವಿಯೋ : 2015, ಬೆಂಗಳೂರು,**
**ದಿನಾಂಕ 05.09.2015**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಗ್ರಾಮ ವಿಕಾಸ ಯೋಜನೆಯಡಿ ನಿಗಧಿಪಡಿಸಲಾಗಿದ್ದ ಗರಿಷ್ಠ 5000 ಜನಸಂಖ್ಯೆ ಮಿತಿಯನ್ನು ಸಡಿಲಗೊಳಿಸಿ ಪ್ರತಿ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ 5000

ಜನಸಂಖ್ಯೆಯನ್ನು ಮೀರಿದ ಗರಿಷ್ಠ 5 ಗ್ರಾಮಗಳನ್ನು ಗರಿಷ್ಠ ರೂ.3.75 ಕೋಟಿಗಳ ಮಿತಿಯೊಳಗೆ ಹಾಗೂ 2 ಪೂರ್ಣ ತಾಲ್ಲೂಕು ಹಾಗೂ ಅದಕ್ಕಿಂತ ಹೆಚ್ಚಿನ ಭಾಗವನ್ನು ಹೊಂದಿರುವ 6 ವಿಧಾನಸಭಾ ಕ್ಷೇತ್ರಗಳಿಗೆ ಗರಿಷ್ಠ ರೂ.6.00 ಕೋಟಿಯ ಮಿತಿಯೊಳಗೆ 8000 ಜನಸಂಖ್ಯೆಯನ್ನು ಮೀರಿದ ಗರಿಷ್ಠ 8 ಗ್ರಾಮಗಳನ್ನು ಆಯ್ಕೆ ಮಾಡಲು ಅವಕಾಶ ಕಲ್ಪಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

3/1/18

**(ಬೂವನಹಳ್ಳಿನಾಗರಾಜ್)**
ನಿರ್ದೇಶಕರು (ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಯನ್ನು ಮಾಹಿತಿಗಾಗಿ:

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು
2. ಮಹಾಲೇಖಪಾಲರು (ಆಡಿಟ್-1 & 2) ಕರ್ನಾಟಕ, ಬೆಂಗಳೂರು
3. ಮಾನ್ಯ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ಮುಖ್ಯ ಮಂತ್ರಿಗಳ ಕಾರ್ಯಾಲಯ ವಿಧಾನ ಸೌಧ.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌದ, ಬೆಂಗಳೂರು.
5. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು (ಸಚಿವ ಸಂಪುಟ) ವಿಧಾನಸೌಧ, ಬೆಂಗಳೂರು.
7. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾ ಮತ್ತು ಪಂ ರಾಜ್ ಇಲಾಖೆ, ಬೆಂಗಳೂರು.
11. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾ ಮತ್ತು ಪಂ ರಾಜ್ ಇಲಾಖೆ, ಬೆಂಗಳೂರು.
12. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
13. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ ಮತ್ತು ಪಂ ರಾಜ್ ಇಲಾಖೆ, ಬೆಂಗಳೂರು.
14. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
15. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖಜಾನಾ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
16. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು.
17. ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 2ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು.
18. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು.
19. ವೈಬ್‌ಸೈಟ್/ಮಾಹಿತಿಕೇಂದ್ರ-(10 ಪ್ರತಿಗಳು), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ. ಬಹುಮಹಡಿ ಕಟ್ಟಡ, ಬೆಂಗಳೂರು.
20. ಸಂಪಾದಕರು, ಕರ್ನಾಟಕ ವಿಕಾಸ.
21. ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.